ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಕೃಷಿ ಮಾರುಕಟ್ಟೆಯಲ್ಲಿ ಮಧ್ಯವರ್ತಿಗಳ ಹಾವಳಿ ತಪ್ಪಿಸುವ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) –

738 (779) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಬೆಂಬಲ ಬೆಳೆಗಿಂತ ಕಡಿಮೆ ಬೆಲೆಗೆ ವರ್ತಕರು ರೈತರಿಂದ ಕೃಷಿ ಉತ್ಪನ್ನಗಳನ್ನು ಖರೀದಿಸುವ ಮೂಲಕ ರೈತರಿಗೆ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿಯ ವಂಚಕ ವರ್ತಕರ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ;

(ಇ) 2020-21ನೇ ಸಾಲಿನಲ್ಲಿ ಯಾವ ಯಾವ ಕೃಷಿ ಬೆಳೆಗಳಿಗೆ ಎಷ್ಟು ಬೆಂಬಲ ಬೆಲೆ ನಿಗಧಿ ಪಡಿಸಲಾಗಿದೆ? (ಬೆಳೆವಾರು ವಿವಿರ ನೀಡುವುದು)